ದಿಃ 29-10-2022 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದ**

ನಾನು ನನ್ನ ಮುಖ್ಯ ವಿಚಾರಣೆ ಬಾಬ್ತು ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿರುವ ಸಹಿ ನನ್ನದು. ಅದರಲ್ಲಿರುವ ವಿಷಯಗಳೆಲ್ಲ ಸತ್ಯವಾಗಿವೆ. ಸದರಿ ವಿಷಯಗಳನ್ನು ನಾನೇ ಹೇಳಿ ಬರೆಯಿಸಿರುತ್ತೇನೆ.

ಸಾಕ್ಷಿಯು ಜನನ ಮತ್ತು ಮರಣಗಳ ಮುಖ್ಯ ರಿಜಿಸ್ಟ್ರಾರ್ ರವರು ನೀಡಿದಂತಹ ಜನನ ಪ್ರಮಾಣ ಪತ್ರವನ್ನು ನೋಡುತ್ತಿದ್ದು ಅದನ್ನು ನಿಪಿ-**1** ಎಂದು, ಹಿಂಬರಹವನ್ನು ಪತ್ರವನ್ನು ನೋಡುತ್ತಿದ್ದು ಅದನ್ನು ನಿಪಿ-**2** ಎಂದು, ಸಾಕ್ಷಿಯು ತನ್ನ ಮೂಲ ಆಧಾರ್ ಕಾರ್ಡನ್ನು ನೋಡುತ್ತಿದ್ದು ಅದನ್ನು ನಿಪಿ-**3** ಎಂದು, ಸಾಕ್ಷಿಯು ತನ್ನ ಮಗಳ ಮೂಲ ಆಧಾರ್ ಕಾರ್ಡನ್ನು ನಿಪಿ-**4** ಎಂದು ಗುರುತಿಸಲಾಯಿತು. ಆದ್ದರಿಂದ ದಾವೆಯಲ್ಲಿ ಕೇಳಿದಂತೆ ಆದೇಶ ಮಾಡಬೇಕಾಗಿ ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲುಃ** ಪ್ರತಿವಾದಿ ಪರ ಡಿಜಿಪಿ ವಕೀಲರಿಂದಃ

ನನ್ನ ಮಗಳ ಜನನ ಪ್ರಮಾಣ ಪತ್ರವನ್ನು ಯಾವಾಗ ಪಡೆದುಕೊಂಡಿರುತ್ತೇನೆ ಎಂದರೆ ಸಾಕ್ಷಿಯು ಇತ್ತೀಚೆಗೆ ಪಡೆದುಕೊಂಡಿರುತ್ತೇನೆ. ನನ್ನ ಮಗಳು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಪಾಲ್ಗೊಳ್ಳಲು ಆದ ಕಾರಣ ಅವಳ ಪರೀಕ್ಷಯ ಉದ್ದೇಶದಿಂದ ಈ ದಾವೆಯನ್ನು ಹೂಡಿರುತ್ತೇನೆ. ನನ್ನ ಮಗಳ ಹೆಸರು ದೃತಿ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರಿದು ದೃತಿ ಶೇರಿಗಾರ್ ಎಂದು ನುಡಿದಿರುತ್ತಾರೆ. ನನ್ನ ಮಗಳು ಸೋನಿಯಾ ಕ್ಲಿನಿಕ್ ಮಣಿಪಾಲದಲ್ಲಿ ಹುಟ್ಟಿರುತ್ತಾಳೆ. ಅಲ್ಲಿ ಮಾಹಿತಿಯನ್ನು ನೀಡಿರುತ್ತಾರೆ ಎಂದರೆ ಸಾಕ್ಷಿಯು ನಾನೇ ನೀಡಿರುತ್ತೇನೆ. ನಾನು ಮಾಹಿತಿಯನ್ನು ನೀಡಿದ ಪ್ರಕಾರವೇ ಪ್ರತಿವಾದಿಗಳು ನಮೂದು ಮಾಡಿರುತ್ತಾರೆ ಎಂದರೆ ಸರಿಯಲ್ಲ. ನನ್ನ ವಾದ ಪತ್ರದಲ್ಲಿ ಹೇಳಿರುವುದೆಲ್ಲಾ ಸುಳ್ಳು ನಾನು ಯಾವುದೇ ಪರಿಹಾರವನ್ನು ಪಡೆಯಲು ಅರ್ಹನಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆಃ** ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಬೆರಳಚ್ಚು ಮಾಡಿಸಲಾಯಿತು.)

ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದರು.

ಎರಡನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಜೆ.ಎಂ.ಎಫ್.ಸಿಉಡುಪಿ.